ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

4 ವಿಧಾನಸಭೆ ಸದಸ್ಯರು

ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE: 19/4/21

ಸಂ.ಕ 19/4/21

# ರೇಣುಕಾಚಾರ್ಯಗೆ ಕೊರೊನಾ

ದಾವಣಗೆರೆ : ಮಸ್ಕಿ ಸೇರಿದಂತೆ ಉಪ ಚುನಾವಣೆಗಾಗಿ ಕಳೆದ 15 ದಿನಗಳಿಂದ ಪ್ರಚಾರದಲ್ಲಿ ತೊಡಗಿದ್ದ ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ, ಹೊನ್ನಾಳಿ ಶಾಸಕ ಎಂ.ಪಿ.ರೇಣುಕಾಚಾರ್ಯ ಕೊರೋನಾ ಸೋಂಕಿಗೆತುತ್ತಾಗಿದ್ದಾರೆ.



ಉಪ ಚುನಾವಣೆಯಲ್ಲಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಸಚಿವರು, ಶಾಸಕರು, ಪಕ್ಷದ ಮುಖಂಡರೊಂದಿಗೆ ಮಸ್ಕಿ ಕ್ಷೇತ್ರದಲ್ಲಿ ಪ್ರಚಾರ ಕೈಗೊಂಡಿದ್ದ ರೇಣುಕಾಚಾರ್ಯ ಜೊತೆ ಪ್ರಚಾರದಲ್ಲಿ ಭಾಗಿಯಾದ ಬಹುತೇಕರಿಗೆ ಕೊರೊನಾ ಸೋಂಕು ದೃಢಪಟ್ಟಿತ್ತು. ಈ ಹಿನ್ನಲೆಯಲ್ಲಿ 15 ದಿನಗಳಿಂದ ಮಸ್ಕಿ ಕ್ಷೇತ್ರದ ಉಪ ಚುನಾವಣೆ ಪ್ರಚಾರದಲ್ಲಿಭಾಗಿಯಾಗಿದ್ದರೇಣುಕಾಚಾರ್ಯ ಹೊನ್ನಾಳಿಯಲ್ಲಿ ಕೋವಿಡ್ ಟೆಸ್ಟ್ ಮಾಡಿಸಿಕೊಂಡಿದ್ದರು.

ಕೊರೋನಾ ಟೆಸ್ಟ್‌ನಲ್ಲಿ ಶಾಸಕ ರೇಣುಕಾಚಾರ್ಯರಿಗೆ ಸೋಂಕು ಇರುವುದು ದೃಢಪಟ್ಟಿದೆ.

.ರೇಣುಕಾಚಾರ್ಯರ ಪತ್ನಿ ಸುಮಾ ಅವರೂ ಸಹ ಟೆಸ್ಟ್ ಮಾಡಿಸಿದ್ದು, ವರದಿ ನಿರೀಕ್ಷಿಸಿದೆ. ಪ್ರಾಥಮಿಕ ವರದಿಯಲ್ಲಿ ರೇಣುಕಾಚಾರ್ಯರಿಗೆ ನೆಗೆಟಿವ್ ಬಂದಿದ್ದರೂ,

ಇಂದು ಸೋಂಕು ಇರುವುದು ದೃಢಪಟ್ಟ ಹಿನ್ನಲೆಯಲ್ಲಿ ಹೋಂ ಐಸೋಲೇಶನ್‌ಗೆ ಒಳಗಾಗಿದ್ದಾರೆ. ಕಳೆದ 15 ದಿನಗಳಿಂದಲೂ ನಿರಂತರ ಉಪ ಚುನಾವಣೆ ಪ್ರಚಾರದಲ್ಲಿ ಭಾಗಿಯಾಗಿದ್ದ ರೇಣುಕಾಚಾರ್ಯ ಈಚೆಗೆ ತಮ್ಮೊಂದಿಗೆ ಸಂಪರ್ಕದಲ್ಲಿದ್ದ ಜನರು, ಹೊನ್ನಾಳಿ-ನ್ಯಾಮತಿ ಅವಳಿ ತಾಲೂಕಿನ ಮುಖಂಡರು, ಸಾರ್ವಜನಿಕರು, ಬೆಂಬಲಿಗರೂ ತಕ್ಷಣವೇ ಕೋವಿಡ್ ಟೆಸ್ಟ್ ಮಾಡಿಸುವಂತೆ ಕೋರಿದ್ದಾರೆ.